Ex. 46/2019 RW1

ದಿನಾಂಕ: 06.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರಿದ ಪಾಟೀ ಸವಾಲು ಅರ್ಜಿದಾರರ ಪರ ಶ್ರೀ ಬಿ ಜಿ ಎಸ್ ವಕೀಲರಿಂದಃ-**

ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ವಜಾ ಆದ 2012 ನೇ ಇಸವಿಯಿಂದ ಅರ್ಜಿದಾರರಿಗೆ ನಾನು ಮತ್ತು ನನ್ನ ತಂದೆ ತೊಂದರೆ ನೀಡುತ್ತಿದ್ದೇವೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನನ್ನ ತಂದೆಯ ವಿರುದ್ಧ ಅಮಲುಜಾರಿ ಸಂಖ್ಯೆ:83/2010 ರಂತೆ ಪ್ರಕರಣ ದಾಖಲಿಸಿದ್ದರು ಎಂದರೆ ನನಗೆ ಗೊತ್ತಿರುವುದಿಲ್ಲ . ಸದರಿ ಪ್ರಕರಣದಲ್ಲಿ ನನ್ನ ತಂದೆ ವಕೀಲರನ್ನು ನೇಮಿಸಿ ಪ್ರಕರಣ ನಡೆಸಿರುತ್ತಾರೆ ಎಂದರೆ ಸರಿ . ದಿಃ03.08.2013 ರಂದು ಪೋಲೀಸ್ ರಕ್ಷಣೆ ನೀಡಬೇಕೆಂದು ಆದೇಶ ಆಗಿತ್ತು ಎಂದರೆ ನನಗೆ ಗೊತ್ತಿರುವುದಿಲ್ಲ. ಸದರಿ ಆದೇಶವನ್ನು ಪ್ರಶ್ನಿಸಿರುವುದಿಲ್ಲ.ಪೋಲೀಸ್ ರಕ್ಷಣೆ ಇದ್ದರೂ ಸಹ ನಾನು ಹಾಗೂ ನನ್ನ ತಂದೆ ಅರ್ಜಿದಾರರಿಗೆ ಈಗಲೂ ಸಹ ತೊಂದರೆ ನೀಡುತ್ತಿದ್ದೇವೆ ಎಂದರೆ ಸರಿಯಲ್ಲ. ಆದ್ದರಿಂದ ನನ್ನ ತಂದೆಗೆ ಶಿಕ್ಷೆ ನೀಡಬೇಕು ಹಾಗೂ ಆಸ್ತಿಯನ್ನು ಮುಟ್ಟುಗೋಲು ಮಾಡಬೇಕೆಂದು ಅರ್ಜಿ ಸಲ್ಲಿಸಿರುತ್ತಾರೆಂದು ಎಂದರೆ ಸರಿಯಲ್ಲ. ಮಾನ್ಯ ಉಚ್ಚನ್ಯಾಯಾಲಯದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಿರುವುದಿಲ್ಲ. ಎಲ್ಲಾ ನ್ಯಾಯಾಲಯದಲ್ಲಿ ನಾನು ಮತ್ತು ನನ್ನ ತಂದೆ ಅರ್ಜಿದಾರರಿಗೆ ತೊಂದರೆ ನೀಡುತ್ತಿದ್ದೇವೆಂದು ಆದೇಶ ಆಗಿರುತ್ತದೆ ಎಂದರೆ ಅರ್ಜಿದಾರರಿಗೆ ಯಾವುದೇ ಅಸ್ತಿ ಇರುವುದಿಲ್ಲವೆಂದು ನುಡಿಯುತ್ತಾರೆ. ನಾನು ರಾಜಕೀಯವಾಗಿ ಪ್ರಭಾವಿ ಆಗಿರುವ ಕಾರಣ ಅರ್ಜಿದಾರರಿಗೆ ಪೋಲೀಸ್ ರಕ್ಷಣೆ ಸಿಗುತ್ತಿಲ್ಲ ಎಂದರೆ ಸರಿಯಲ್ಲ. ಆದ್ದರಿಂದ ಕಾನೂನು ಪ್ರಕಾರ ಶಿಕ್ಷೆ ನೀಡಬೇಕೆಂದು ಈ ಪ್ರಕರಣ ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ತಕರಾರಿನಲ್ಲಿ ಹೇಳಿರುವ ವಿಚಾರಕ್ಕೆ ಪೂರಕವಾಗಿ ಯಾವುದೇ ದಾಖಲಾತಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನನಗಾಗಲೀ , ನನ್ನ ತಂದೆಗಾಗಲೀ ಅರ್ಜಿದಾರರ ಆಸ್ತಿಯಲ್ಲಿ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಅರ್ಜಿದಾರರ

ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಅವರಿಗೆ ಮೊದಲಿನಿಂದ ತೊಂದರೆ ನೀಡುತ್ತಾ ಬಂದಿರುತ್ತೇನೆ ಎಂದರೆ ಸರಿಯಲ್ಲ. ನಾವು ದೌರ್ಜನ್ಯ ಮಾಡುತ್ತಿರುವ ಕಾರಣ ನನ್ನ ವಿರುದ್ಧ ಹಲವಾರು ಪ್ರಕರಣಗಳು ನಡೆಯುತ್ತಿವೆ ಎಂದರೆ ಸರಿಯಲ್ಲ, ಎರಡು ಪ್ರಕರಣಗಳು ಇರುತ್ತವೆ. ನ್ಯಾಯಾಲಯದ ಆದೇಶವನ್ನು ನಾವು ಸರಿಯಾಗಿ ಪಾಲನೆ ಮಾಡುತ್ತಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯದ ಆದೇಶಕ್ಕೆ ಗೌರವ ಕೊಟ್ಟು ನಡೆದು ಕೊಳುತ್ತಿಲ್ಲ ಎಂದರೆ ಸರಿಯಲ್ಲ. ಊರಿನಲ್ಲಿ ಪಂಚಾಯಿತಿಗೆ ಮಾಡಿದರೆ ನಾನು ಕೇಳುವುದಿಲ್ಲ ಎಂದರೆ ಯಾರೂ ಪಂಚಾಯಿತಿ ಮಾಡಿರುವುದಿಲ್ಲ . ಪೋಲೀಸರು ನ್ಯಾಯಾಲಯದ ಆದೇಶವನ್ನು ಪಾಲನೆ ಮಾಡಬೇಕೆಂದು ಹೇಳಿದರೂ ಸಹ ನಾನು ಕೇಳುತ್ತಿಲ್ಲ ಎಂದರೆ ಸುಳ್ಳು ದಾಖಲೆಗಳನ್ನು ನೀಡಿರುವ ಕಾರಣ ನಾನು ಒಪ್ಪವುದಿಲ್ಲ. ದಾವಾ ಸ್ವತ್ತಿನಲ್ಲಿ ಯಾವುದೇ ಹಕ್ಕು ಅಧಿಕಾರ ಅಥವಾ ಸ್ವಾಧೀನ ಇಲ್ಲದೇ ಇದ್ದರೂ ಸುಳ್ಳು ಸಾಧನೆ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಸ್ವಾಧೀನದಲ್ಲಿ ಇರುವ ಬಗ್ಗೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆಗೆ ಶಿಕ್ಷೆ ಆಗುತ್ತದೆಂದು ತಿಳಿದು ನಾನು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲಃ

(ತೆ.ನ್ಯಾಸಾ.ಹೇ.ನನ್ನ ಉಕ್ತ ಲೇಖನದಂತೆ ಬೆ.ಮಾಡಲಾಯಿತು).

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ನಾಸಿರ ಬಾನು)
2 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಭದ್ರಾವತಿ.